ಹುಬ್ಬಳ್ಳಿ-ಧಾರವಾಡ ಮಹಾನಗರ ವ್ಯಾಪ್ತಿಯ ಮೃಗಾಲಯ ನಿರ್ಮಿಸುವ ಕುರಿತು.

555(613)

ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್(ಹುಬ್ಬಳ್ಳಿ): ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ವ್ಯಾಪ್ತಿಯಲ್ಲಿ ರಾಷ್ಟ್ರ ಮಟ್ಟದ ಮೃಗಾಲಯ ಸ್ಥಾಪಿಸುವ ವಿಚಾರ ಸರ್ಕಾರದ ಗಮನದಲ್ಲಿದೆಯೆ?

ಆ) ಇದ್ದಲ್ಲಿ ಇದಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು?

ಇ) ಸದರಿ ಮೃಗಾಲಯದ ಕೆಲಸ ಯಾವ ವರ್ಷದಿಂದ ಪ್ರಾರಂಭಿಸಲಾಗುವುದು?

ಈ) ಇಲ್ಲವಾದಲ್ಲಿ ಕಾರಣವೇನು?

ಶ್ರೀ ಕೆ.ಎಚ್.ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಧಾರವಾಡ ಜಿಲ್ಲೆಯ ಬೂದನಾಳ ರಕ್ಷಿತ ಅರಣ್ಯ ಪ್ರದೇಶದಲ್ಲಿ ಮೃಗಾಲಯವೊಂದನ್ನು ಸ್ಥಾಪಿಸುವ ಬಗ್ಗೆ ಯೋಜನೆಯೊಂದು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಸದರಿ ಯೋಜನೆಯ ಅಂದಾಜು ಮೊತ್ತವು ರೂ, 10.25 ಕೋಟಿಗಳು.

ಇ) ವನ್ಯಜೀವಿ ಸಂರಕ್ಷಣಾ ಕಾಯ್ದೆ 1972ರ ಪ್ರಕಾರ ಹಾಗೂ ಶ್ರೇಷ್ಠ ನ್ಯಾಯಾಲಯದ ಆದೇಶದ ಪ್ರಕಾರ ಯಾವುದೇ ಮೃಗಾಲಯವನ್ನು ಕೇಂದ್ರ ಮೃಗಾಲಯ ಪ್ರಾಧಿಕಾರ ನವದೆಹಲಿ ಇದರಿಂದ ಅನುಮತಿ ಪಡೆಯದೆ ಸ್ಥಾಪಿಸುವಂತಿಲ್ಲ. ಸದರಿ ಮೃಗಾಲಯದ ಕಾಮಗಾರಿಗಳನ್ನು ಕೇಂದ್ರ ಮೃಗಾಲಯ ಪ್ರಾಧಿಕಾರದಿಂದ ಮೊತ್ತ ದೊರೆತ ನಂತರ ಹಾಗೂ ರಾಜ್ಯ ಸರ್ಕಾರದಿಂದ ಮಂಜೂರಾತಿ ದೊರೆತ ನಂತರ ಮಾತ್ರ ತೆಗೆದುಕೊಳ್ಳಲಾಗುವುದು.

ಈ) ಉದ್ಭವಿಸುವುದಿಲ್ಲ.

ಹುಬ್ಬಳ್ಳಿ-ಧಾರವಾಡ ಮಹಾನಗರ ಮಧ್ಯದಲ್ಲಿರುವ ಸೂಪರ್ ಫಾಸ್ಟ್ ರಸ್ತೆ

ಪರಿವರ್ತನೆ.

556(615)

ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯಾತ್ ಖಾನ್ (ಹುಬ್ಬಳ್ಳಿ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಹುಬ್ಬಳ್ಳಿ ಧಾರವಾಡ ಮಹಾನಗರ ಮಧ್ಯದಲ್ಲಿರುವ ರಸ್ತೆ ಸೂಪರ್‌ಫಾಸ್ಟ್ ರಸ್ತೆಯಾಗಿ ಪರಿವರ್ತಿಸುವ ವಿಚಾರ ಸರ್ಕಾರದ ಗಮನದಲ್ಲಿದೆಯೇ?

ಆ. ಇದ್ದಲ್ಲಿ, ಸದರಿ ಕೆಲಸ ಯಾವ ವರ್ಷ ಪ್ರಾರಂಭಿಸಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ. ಸದ್ಯಕ್ಕೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆ. ಪ್ರಾರಂಭಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಲೋಕೋಪಯೋಗಿ ಇಲಾಖೆಯಲ್ಲಿ ಖಾಲಿಯಿರುವ ಅಧಿಕಾರಿ ಹುದ್ದೆಗಳು.

558(೯೦೩)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

೧) ಲೋಕೋಪಯೋಗಿ ಇಲಾಖೆಯಲ್ಲಿ ಪ್ರಮುಖ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಖಾಲಿ ಇರುವ ಹುದ್ದೆಗಳ ವಿವರ ನೀಡುವುದು.

೨) ಸಿಬ್ಬಂದಿ ಇಲ್ಲದೇ ಲೋಕೋಪಯೋಗಿ ಇಲಾಖೆಯ ಅನೇಕ ಕಾಮಗಾರಿಗಳು ಕುಂಠಿತಗೊಂಡಿರುವುದು ನಿಜವೇ?

೩) ಖಾಲಿ ಇರುವ ಹುದ್ದೆಗಳಲ್ಲಿ ಎಷ್ಟು ಜನ ಅಧಿಕಾರಿಗಳನ್ನು ತಾತ್ಕಾಲಿಕವಾಗಿ ನಿಯೋಜನೆ ಮೇರೆಗೆ ತೆಗೆದುಕೊಳ್ಳಲಾಗಿದೆ.

೪) ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಯಾವುದೇ